**All India Radio: Bangalore**
**National Bulletin In Kannada**
**05.07.2025 1.10 p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**05.07.2025 1.10 p.m.**
**<><><><>**

ಮುಖ್ಯಾಂಶಗಳು

1. ಪ್ರಧಾನಿ ನರೇಂದ್ರ ಮೋದಿ ಅರ್ಜೆಂಟೀನಾ ಭೇಟಿ; ಅಧ್ಯಕ್ಷ ಜೇವಿಯರ್ ಮಿಲಿ ಅವರೊಂದಿಗೆ ನಿಯೋಗ ಮಟ್ಟದ ಮಾತುಕತೆ
2. ನಾಳೆ ಬ್ರೆಜಿಲ್‌ನಲ್ಲಿ ಬ್ರಿಕ್ಸ್ ಶೃಂಗಸಭೆ; ಪಾಲುದಾರ ರಾಷ್ಟ್ರಗಳ ನಾಯಕರೊಂದಿಗೆ ಪ್ರಧಾನಿ ಭಾಗಿ
3. ಕೇಂದ್ರ ವಾಣಿಜ್ಯ ಸಚಿವ ಪಿಯೂಷ್ ಗೋಯಲ್ ಕರ್ನಾಟಕ ಪ್ರವಾಸ; ಬೆಂಗಳೂರಿನ ಏರೋಸ್ಪೇಸ್ ವಿಶೇಷ ಆರ್ಥಿಕ ವಲಯಕ್ಕೆ ಭೇಟಿ
4. ಕೆನಡಾ ಓಪನ್ ಸೂಪರ್ ೩೦೦ ಬ್ಯಾಡ್ಮಿಂಟನ್ ಟೂರ್ನಿ; ಪುರುಷರ ಸಿಂಗಲ್ಸ್ ವಿಭಾಗದಲ್ಲಿ ಭಾರತದ ಕಿಡಂಬಿ ಶ್ರೀಕಾಂತ್ ಸೆಮಿಫೈನಲ್ಸ್ ಪ್ರವೇಶ
5. ಆಂಡರ್‌ಸನ್ - ತೆಂಡೂಲ್ಕರ್ ಟ್ರೋಫಿ ಟೆಸ್ಟ್ ಕ್ರಿಕೆಟ್; ಎರಡನೇ ಪಂದ್ಯದ ನಾಲ್ಕನೇ ದಿನದಾಟದಲ್ಲಿಂದು ಎರಡನೇ ಇನ್ನಿಂಗ್ಸ್ ಮುಂದುವರಿಸಲಿರುವ ಭಾರತ

<><><><>

ತಮ್ಮ ಐದು ರಾಷ್ಟ್ರಗಳ ಭೇಟಿಯ ಮೂರನೇ ಚರಣದ ಭಾಗವಾಗಿ ಪ್ರಧಾನಿ ನರೇಂದ್ರ ಮೋದಿ ಇಂದು ಅರ್ಜೆಂಟೀನಾದ ರಾಜಧಾನಿ ಬ್ಯುನೋಸ್ ಏರ್ಸ್‌ಗೆ ತಲುಪಿದ್ದಾರೆ. ಅವರಿಗೆ ಅಲ್ಲಿನ ಭಾರತೀಯ ಸಮುದಾಯದವರು ವಿಶೇಷ ಶಾಸ್ತ್ರೀಯ ನೃತ್ಯ ಪ್ರದರ್ಶನದ ಮೂಲಕ ಆತ್ಮೀಯ ಸ್ವಾಗತ ಕೋರಿದರು. ಈ ಭೇಟಿ ಜಾಗತಿಕ ದಕ್ಷಿಣದೊಂದಿಗೆ ಭಾರತದ ನಿಕಟ ಸಂಪರ್ಕವನ್ನು ಮತ್ತಷ್ಟು ಬಲಪಡಿಸುವ ಉದ್ದೇಶ ಹೊಂದಿದೆ. ಇಂದು ಸಂಜೆ ಅವರು ಅರ್ಜೆಂಟೀನಾದ ಖ್ಯಾತ ಸ್ವಾತಂತ್ರ್ಯ ಹೋರಾಟಗಾರ ಹಾಗೂ ರಾಷ್ಟ್ರೀಯ ನಾಯಕ ಜನರಲ್ ಜಾಸ್ ಡಿ ಸಾನ್ ಮಾರ್ಟಿನ್ ಅವರಿಗೆ ಗೌರವ ನಮನ ಸಲ್ಲಿಸಲಿದ್ದಾರೆ. ಬಳಿಕ ಪ್ರಧಾನಿ ಅವರಿಗೆ ಸಾಂಪ್ರದಾಯಿಕ ಸ್ವಾಗತ ಕೋರಲಾಗುವುದು. ಪ್ರಧಾನಿ ನರೇಂದ್ರ ಮೋದಿ, ಅರ್ಜೆಂಟೀನಾ ಅಧ್ಯಕ್ಷ ಜೇವಿಯರ್ ಮಿಲಿ

ಅವರೊಂದಿಗೆ ನಿಯೋಗಮಟ್ಟದ ಮಾತುಕತೆ ನಡೆಸಲಿದ್ದಾರೆ. ಈ ಭೇಟಿ ಕಾರ್ಯತಂತ್ರದ ಪಾಲುದಾರಿಕೆಯನ್ನು ಮತ್ತಷ್ಟು ಸದೃಢಗೊಳಿಸುವ ಜೊತೆಗೆ ಸಹಕಾರಕ್ಕಾಗಿ ವಿವಿಧ ಮಾರ್ಗಗಳನ್ನು ತೆರೆಯಲಿದೆ. ಈ ನಿಟ್ಟಿನಲ್ಲಿ ವ್ಯಾಪಾರ ಮತ್ತು ಹೂಡಿಕೆ, ಆರೋಗ್ಯ ಮತ್ತು ಔಷಧಿ, ರಕ್ಷಣೆ ಮತ್ತು ಭದ್ರತೆ, ಮೂಲಸೌಕರ್ಯ, ಗಣಿಗಾರಿಕೆ ಮತ್ತು ಖನಿಜ ಸಂಪನ್ಮೂಲ, ಕೃಷಿ ಹಸಿರು ಇಂಧನ, ಡಿಜಿಟಲ್ ನಾವಿನ್ಯತೆ, ತಂತ್ರಜ್ಞಾನ, ವಿಪತ್ತು ನಿರ್ವಹಣೆ, ಶಿಕ್ಷಣ ಸೇರಿದಂತೆ ಬಹು ಆಯಾಮದ ವಿವಿಧ ಕ್ಷೇತ್ರಗಳಲ್ಲಿ ಸಹಕಾರ ಬಲವರ್ಧನೆಗೆ ಒತ್ತು ನೀಡಲಾಗುವುದು. ಪ್ರಧಾನಿ ನರೇಂದ್ರ ಮೋದಿ ಹಾಗೂ ಅರ್ಜಂಟೀನಾ ಅಧ್ಯಕ್ಷ ಜೇವಿಯರ್ ಮಿಲಿ, ನಡುವಿನ ಸಭೆ ಕಳೆದ ವರ್ಷ ರಿಯೋ ಡಿ ಜನೈರೋದಲ್ಲಿ ನಡೆದ ಜಿ-೨೦ ಶೃಂಗಸಭೆ ನೇಪಥ್ಯದಲ್ಲಿ ನಡೆದಿತ್ತು. ಈ ಬಾರಿ ಕೈಗೊಂಡಿರುವ ಪ್ರವಾಸ ೫೭ ವರ್ಷಗಳ ನಂತರ ಭಾರತೀಯ ಪ್ರಧಾನಮಂತ್ರಿಯೊಬ್ಬರು ಕೈಗೊಂಡಿರುವ ಮೊದಲ ದ್ವಿಪಕ್ಷೀಯ ಭೇಟಿ ಇದಾಗಿದೆ.

<><><>

ನಾಳೆ ಮತ್ತು ನಾಡಿದ್ದು ಬ್ರೆಜಿಲ್‌ನ ರಿಯೊ ಡಿ ಜನೈರೋದಲ್ಲಿ ನಡೆಯಲಿರುವ ಬ್ರಿಕ್ಸ್ ಶೃಂಗಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಪಾಲ್ಗೊಳ್ಳಲಿದ್ದಾರೆ. ಈ ವೇಳೆ ಪ್ರಧಾನಿ, ಬ್ರಿಕ್ಸ್ ಶೃಂಗದ ಹತ್ತು ಇತರ ರಾಷ್ಟ್ರಗಳ ನಾಯಕರೊಂದಿಗೆ ವೇದಿಕೆ ಹಂಚಿಕೊಳ್ಳಲಿದ್ದಾರೆ. ಬ್ರಿಕ್ಸ್ ಜಾಗತಿಕ ಜಿಡಿಪಿಯ ಶೇಕಡ ೨೯ರಷ್ಟು ಹಾಗೂ ಜಾಗತಿಕ ವ್ಯಾಪಾರದ ಶೇಕಡ ೨೩ರಷ್ಟು ಪಾಲನ್ನು ಪ್ರತಿನಿಧಿಸುತ್ತದೆ. ನೇರ ವಿದೇಶಿ ಬಂಡವಾಳದ ಶೇಕಡ ೨೪ರಷ್ಟನ್ನು ಮತ್ತು ಜಾಗತಿಕ ತೈಲ ಉತ್ಪಾದನೆಯ ಶೇಕಡ ೪೩ರಷ್ಟನ್ನು ಬ್ರಿಕ್ಸ್ ಕೊಡುಗೆ ನೀಡುತ್ತದೆ. ಬ್ರೆಜಿಲ್ ಅಧ್ಯಕ್ಷತೆಯಲ್ಲಿ ನಡೆಯುತ್ತಿರುವ ಈ ಬಾರಿಯ ಬ್ರಿಕ್ಸ್ ಶೃಂಗಸಭೆ, ಜಾಗತಿಕ ಆರೋಗ್ಯ, ವ್ಯಾಪಾರ, ಹೂಡಿಕೆ ಮತ್ತು ಹಣಕಾಸು, ಹವಾಮಾನ ಬದಲಾವಣೆ, ಕೃತಕ ಬುದ್ಧಿಮತ್ತೆ ನಿರ್ವಹಣೆ, ಬಹು ಆಯಾಮದ ಶಾಂತಿ ಮತ್ತು ಭದ್ರತಾ ಮೂಲಸೌಕರ್ಯ ಹಾಗು ಸಾಂಸ್ಥಿಕ ಅಭಿವೃದ್ಧಿ ಸೇರಿದಂತೆ ಒಟ್ಟು ೬ ಆದ್ಯತಾ ಕ್ಷೇತ್ರಗಳಾಗಿ ಪರಿಗಣಿಸಲಾಗಿದೆ. ಬ್ರಿಕ್ಸ್ ಶೃಂಗಸಭೆ ನಂತರ ಪ್ರಧಾನಿ ನರೇಂದ್ರ ಮೋದಿ ಅವರ ಬ್ರೆಝಿಲ್ ಭೇಟಿ ಮಹತ್ವದ್ದಾಗಿದೆ. ಈ ವೇಳೆ ಅವರು ಅಧ್ಯಕ್ಷ ಲೂಯಿಜ್ ಇನಾಸಿಯೋ ಲುಲಾ ಡಿಸಿಲ್ವ ಅವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಿ, ಹಲವು ಒಪ್ಪಂದಗಳಿಗೆ ಸಹಿ ಹಾಕುವ ನಿರೀಕ್ಷೆಯಿದೆ. ಭಾರತದ ಪ್ರಧಾನಿಯೊಬ್ಬರು ಬ್ರೆಜಿಲ್‌ಗೆ ಕೈಗೊಂಡಿರುವ ಆರು ದಶಕಗಳಲ್ಲೇ ಮೊದಲ ಭೇಟಿ ಇದಾಗಿದೆ.

<><><>

ಬೆಂಗಳೂರು ಪ್ರವಾಸದಲ್ಲಿರುವ ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಇಂದು ಐಐಟಿ ಮದ್ರಾಸ್ ಅಲ್ಯೂಮ್ನಿ ಅಸೋಸಿಯೇಷನ್ ಸಂಗಮ್ - ೨೦೨೫ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ.  ಮಧ್ಯಾಹ್ನ ಅವರು, ಕೈಗಾರಿಕೋದ್ಯಮಿಗಳೊಂದಿಗೆ ಸಂವಾದ ನಡೆಸಲಿದ್ದು, ಬಳಿಕ ಸಂಜೆ ದೇವನಹಳ್ಳಿಯಲ್ಲಿ ಏರೋಸ್ಪೇಸ್ ವಿಶೇಷ ಆರ್ಥಿಕ ವಲಯಕ್ಕೆ ಭೇಟಿ ನೀಡಿ, ಅಲ್ಲಿನ ಸಿಬ್ಬಂದಿಯೊಂದಿಗೆ ಸಂವಾದ ನಡೆಸಲಿದ್ದಾರೆ.

<><><>

ನಾಳೆಯಿಂದ ಎರಡು ದಿನಗಳಿಗಾಗಿ ಉಪರಾಷ್ಟ್ರಪತಿ ಜಗದೀಪ್ ಧನಕರ್ ಕೇರಳಕ್ಕೆ ಭೇಟಿ ನೀಡಲಿದ್ದಾರೆ. ನಾಡಿದ್ದು, ಉಪರಾಷ್ಟ್ರಪತಿ ತ್ರಿಶೂರ್ ಜಿಲ್ಲೆಯಲ್ಲಿರುವ ಗುರುವಾಯುರ್ ದೇವಸ್ಥಾನದಲ್ಲಿ ಪ್ರಾರ್ಥನೆ ಸಲ್ಲಿಸಲಿದ್ದು, ಸಂಜೆ ಕೊಚ್ಚಿಯಲ್ಲಿರುವ ರಾಷ್ಟ್ರೀಯ ಉನ್ನತ ಕಾನೂನು ವಿಶ್ವವಿದ್ಯಾಲಯ - ಎನ್‌ಯುಎಎಲ್‌ಎಸ್‌ನಲ್ಲಿ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿಯೊಂದಿಗೆ ಸಂವಾದ ನಡೆಸಲಿದ್ದಾರೆ.

<><><>

ಕೆನಡಾ ಓಪನ್ ಸೂಪರ್ ೩೦೦ ಬ್ಯಾಡ್ಮಿಂಟನ್ ಟೂರ್ನಿಯ ಪುರುಷರ ಸಿಂಗಲ್ಸ್ ವಿಭಾಗದಲ್ಲಿ ತಮ್ಮ ಉತ್ತಮ ಆಟವನ್ನು ಮುಂದುವರಿಸಿರುವ ಭಾರತದ ಕಿಡಂಬಿ ಶ್ರೀಕಾಂತ್ ಸೆಮಿಫೈನಲ್ಸ್ ಪ್ರವೇಶಿಸಿದ್ದಾರೆ. ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ಅವರು, ವಿಶ್ವ ಆರನೇ ಶ್ರೇಯಾಂಕಿತ ಚೀನಾದ ಚೌ ಟಿಯನ್ ಅವರನ್ನು ೨೧-೧೮, ೨೧-೯ ಸೆಟ್‌ಗಳ ಅಂತರದಲ್ಲಿ ಮಣಿಸಿ, ಸೆಮೀಸ್ ಹಂತ ತಲುಪಿದರು. ಪ್ರಸ್ತುತ ೪೯ನೇ ಶ್ರೇಯಾಂಕಿತ ಆಟಗಾರರಾಗಿರುವ ಶ್ರೀಕಾಂತ್, ಫೈನಲ್‌ನಲ್ಲಿ ಸ್ಥಾನ ಪಡೆಯಲು ಜಪಾನ್‌ನ ೩ನೇ ಶ್ರೇಯಾಂಕಿತ ಕೆಂಟಾ ನಿಷಿಮೊತೊ ಅವರನ್ನು ಸೆಮಿಫೈನಲ್‌ನಲ್ಲಿ ಎದುರಿಸಲಿದ್ದಾರೆ. ಮಹಿಳಾ ಸಿಂಗಲ್ಸ್‌ನಲ್ಲಿ ಭಾರತದ ಶ್ರೀಯಾನ್ಶಿ ವಾಲಿಶೆಟ್ಟಿ, ಡೆನ್ಮಾರ್ಕ್‌ನ ಅಮೇಲಿ ಸ್ಕಲ್ಜ್ ಅವರ ವಿರುದ್ಧ ಸೋಲನುಭವಿಸಿ, ಟೂರ್ನಿಯಿಂದ ಹೊರಬಿದ್ದರು.

<><><>

ಬರ್ಮಿಂಗ್‌ಹ್ಯಾಮ್‌ನ ಎಡ್ಜ್‌ಬ್ಯಾಸ್ಟನ್‌ನಲ್ಲಿ ನಡೆಯುತ್ತಿರುವ ಭಾರತ - ಇಂಗ್ಲೆಂಡ್ ನಡುವಿನ ಆಂಡರ್‌ಸನ್ - ತೆಂಡೂಲ್ಕರ್ ಟ್ರೋಫಿಯ ಎರಡನೇ ಟೆಸ್ಟ್ ಪಂದ್ಯದ ನಾಲ್ಕನೇ ದಿನವಾದ ಇಂದು, ದಿನದಾಟ ಭಾರತೀಯ ಕಾಲಮಾನ ಮಧ್ಯಾಹ್ನ ೩.೩೦ಕ್ಕೆ ಆರಂಭವಾಗಲಿದ್ದು, ಭಾರತ ತನ್ನ ಎರಡನೇ ಇನ್ನಿಂಗ್ಸ್‌ಅನ್ನು ಮುಂದುವರಿಸಲಿದೆ. ಮೂರನೇ ದಿನವಾದ ನಿನ್ನೆ, ಇಂಗ್ಲೆಂಡ್ ತಂಡವನ್ನು

೪೦೭ ರನ್‌ಗಳಿಗೆ ಸೀಮಿತಗೊಳಿಸಿದ ನಂತರ ತನ್ನ ಎರಡನೇ ಇನ್ನಿಂಗ್ಸ್ ಆರಂಭಿಸಿದ ಭಾರತ, ಒಂದು ವಿಕೆಟ್ ನಷ್ಟಕ್ಕೆ ೭೪ ರನ್ ಗಳಿಸಿದ್ದು, ಕೆ.ಎಲ್. ರಾಹುಲ್ ಮತ್ತು ಕರುಣ್ ನಾಯರ್ ಕಣದಲ್ಲಿದ್ದಾರೆ. ೫ ಪಂದ್ಯಗಳ ಸರಣಿಯಲ್ಲಿ ಮೊದಲನೇ ಪಂದ್ಯ ಗೆದ್ದಿರುವ ಇಂಗ್ಲೆಂಡ್ ೧-೦ ಅಂತರದಲ್ಲಿ ಮುನ್ನಡೆಯಲ್ಲಿದೆ.

<><><>

ಉತ್ತರ ಪ್ರದೇಶದ ಸಂಭಾಲ್ ಜಿಲ್ಲೆಯ ಮೀರತ್ - ಬದೌನ್ ಹೆದ್ದಾರಿಯಲ್ಲಿ ಸಂಭವಿಸಿದ ರಸ್ತೆ ಅಪಘಾತದಲ್ಲಿ ಕನಿಷ್ಠ ೫ ಮಂದಿ ಮೃತಪಟ್ಟಿರುವ ಘಟನೆ ವರದಿಯಾಗಿದೆ. ಮದುವೆಗೆ ಹೊರಟಿದ್ದ ಹತ್ತು ಜನರಿದ್ದ ಕಾರೊಂದು ಹೆದ್ದಾರಿಯಲ್ಲಿ ತೆರಳುತ್ತಿದ್ದ ವೇಳೆ ಕಾಲೇಜೊಂದರ ಗೋಡೆಗೆ ಡಿಕ್ಕಿ ಹೊಡೆದ ಪರಿಣಾಮ ಅಪಘಾತ ಸಂಭವಿಸಿದ್ದು, ಹತ್ತು ಜನರ ಪೈಕಿ ವರ ಸೇರಿದಂತೆ ಕನಿಷ್ಠ ೫ ಮಂದಿ ಮೃತಪಟ್ಟಿದ್ದಾರೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಈ ಘಟನೆ ಕುರಿತು ಸಂತಾಪ ವ್ಯಕ್ತಪಡಿಸಿದ್ದು, ಮೃತಪಟ್ಟವರ ಕುಟುಂಬಸ್ಥರಿಗೆ ಪ್ರಧಾನಮಂತ್ರಿ ರಾಷ್ಟ್ರೀಯ ಪರಿಹಾರ ನಿಧಿಯಿಂದ ೨ ಲಕ್ಷ ರೂಪಾಯಿ ಹಾಗೂ ಗಾಯಗೊಂಡವರಿಗೆ ತಲಾ ೫೦ ಸಾವಿರ ರೂಪಾಯಿ ಪರಿಹಾರ ಘೋಷಿಸಿದ್ದಾರೆ.

<><><>

ಒಡಿಶಾದ ಪುರಿಯಲ್ಲಿ ಇಂದು ನಡೆಯಲಿರುವ ಬಹುದಾ ಯಾತ್ರೆಗೆ ಸಿದ್ಧತೆಗಳು ಬರದಿಂದ ಸಾಗಿವೆ. ಭಗವಾನ್ ಶ್ರೀ ಜಗನ್ನಾಥರು, ಅವರ ಸಹೋದರ ಬಲಭದ್ರ ಮತ್ತು ಸಹೋದರಿ ದೇವಿ ಸುಭದ್ರ ಅವರನ್ನು ಗುಂಡೇಚ ದೇವಸ್ಥಾನದಿಂದ ಮರಳಿ ಜಗನ್ನಾಥ ದೇವಸ್ಥಾನಕ್ಕೆ ತರುವ ವೈಭವಯುತ ಕಾರ್ಯಕ್ರಮ ಇದಾಗಿದೆ.  ಪಹಂಡಿ ಎಂದು ಕರೆಯಲಾಗುವ ಈ ಮೆರವಣಿಗೆ ಹಲವು ಧಾರ್ಮಿಕ ವಿಧಿ ವಿಧಾನಗಳ ಬಳಿಕ ಇಂದು ನಡೆಯುತ್ತಿದೆ. ಮಧ್ಯಾಹ್ನ ಪುರಿ ಗಜಪತಿ ಮಹಾರಾಜ ದಿವ್ಯಸಿಂಗ್ ದೇಬ್‌ನ ದೊರೆ ಛೆರಾ ಪಹನ್ರ ನಡೆಸಿಕೊಡಲಿದ್ದಾರೆ.  ಕಳೆದ ತಿಂಗಳ ೨೯ರಂದು ಗುಂಡೇಚ ದೇವಸ್ಥಾನದ ಬಳಿ ಕಾಲ್ತುಳಿತ ಸಂಭವಿಸಿ, ಮೂವರು ಮೃತಪಟ್ಟು ಹಲವರು ಗಾಯಗೊಂಡ ಹಿನ್ನೆಲೆಯಲ್ಲಿ ಈ ಬಾರಿ ಎಂದಿಗಿಂತಲೂ ಹೆಚ್ಚಿನ ಭದ್ರತಾ ವ್ಯವಸ್ಥೆಗಳನ್ನು ಮಾಡಲಾಗಿದೆ.

<><><>

ತನ್ನ ಪುನರ್ ರಚನಾ ಯೋಜನೆಯ ಭಾಗವಾಗಿ ಜಾಗತಿಕ ತಂತ್ರಜ್ಞಾನ ಸಂಸ್ಥೆ ಮೈಕ್ರೋಸಾಫ್ಟ್ ೨೫ ವರ್ಷಗಳ ಕಾರ್ಯಾಚರಣೆಯ ಬಳಿಕ ಪಾಕಿಸ್ತಾನದಲ್ಲಿ ಅಧಿಕೃತವಾಗಿ ತನ್ನ ಕಾರ್ಯಾಚರಣೆಯನ್ನು ಸ್ಥಗಿತಗೊಳಿಸಿದೆ. ಈ ಕ್ರಮವನ್ನು ಕ್ಲೌಡ್ ಆಧರಿತ ಪಾಲುದಾರ ನೇತೃತ್ವದ

ಮಾದರಿ ಹಾಗೂ ಜಾಗತಿಕ ಮಟ್ಟದಲ್ಲಿ ೬ ಸಾವಿರದ ೧೦೦ ಉದ್ಯೋಗ ಕಡಿತದ ಹಿನ್ನೆಲೆಯಲ್ಲಿ ತೆಗೆದುಕೊಳ್ಳಲಾಗಿದೆ ಎಂದು ಸಂಸ್ಥೆ ಘೋಷಿಸಿದೆ. ಮೈಕ್ರೋಸಾಫ್ಟ್‌ನ ಪಾಕಿಸ್ತಾನ ವಿಭಾಗದ ಮಾಜಿ ಮುಖ್ಯಸ್ಥ ಜವ್ವಾದ್ ರೆಹಮಾನ್, ಈ ಬೆಳವಣಿಗೆಯನ್ನು ದೃಢಪಡಿಸಿದ್ದು, ಪಾಕಿಸ್ತಾನದಲ್ಲಿ ಹೂಡಿಕೆಗೆ ಅನುಕೂಲವಲ್ಲದ ಆರ್ಥಿಕ ಪರಿಸ್ಥಿತಿ, ರಾಜಕೀಯ ಅಸ್ಥಿರತೆ, ಹೆಚ್ಚಿನ ತೆರಿಗೆ ಹಾಗೂ ವ್ಯಾಪಾರ ನಿರ್ಬಂಧಗಳು ಈ ಕ್ರಮಕ್ಕೆ ಕಾರಣವಾಗಿದೆ ಎಂದು ಉಲ್ಲೇಖಿಸಿದ್ದಾರೆ.

<><><><>

ಅಮೆರಿಕದ ಟೆಕ್ಸಸ್‌ನಲ್ಲಿ ಪ್ರವಾಹ ಅಪ್ಪಳಿಸಿದ ಬೆನ್ನಲ್ಲೇ ಕನಿಷ್ಠ ೨೪ ಮಂದಿ ಮೃತಪಟ್ಟಿದ್ದು, ಹಲವರು ನಾಪತ್ತೆಯಾಗಿದ್ದಾರೆ ಎಂದು ಅಲ್ಲಿನ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಟೆಕ್ಸಾಸ್ ಗವರ್ನರ್ ಗ್ರೆಗ್ ಅಬಟ್, ಟೆಕ್ಸಾಸ್ ಹಲವು ಪ್ರಾಂತ್ಯಗಳಲ್ಲಿ ವಿಪತ್ತಿನ ಎಚ್ಚರಿಕೆ ನೀಡಿದ್ದು, ಶೋಧ ಮತ್ತು ರಕ್ಷಣಾ ಕಾರ್ಯಾಚರಣೆ ಮುಂದುವರಿದಿದೆ ಎಂದು ತಿಳಿಸಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>